**Akashvani : Bangalore**
**Regional Bulletin In Kannada**
**12.09.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ರಾಜ್ಯದಲ್ಲಿ ನಕಲಿ ವೈದ್ಯರು ಪತ್ತೆಯಾದರೆ ಕಠಿಣ ಕಾನೂನು ಕ್ರಮ ; ಆರೋಗ್ಯ ಸಚಿವ ಯು.ಟಿ.ಖಾದರ್ ಎಚ್ಚರಿಕೆ**

**೨. ಖಾಸಗಿ ಶಾಲಾ ಶಿಕ್ಷಕರಿಗೂ ರಾಜ್ಯ ಮಟ್ಟದ ಶಿಕ್ಷಕ ಪ್ರಶಸ್ತಿ ನೀಡಲು ಚಿಂತನೆ - ಸಚಿವ ಮಧುಬಂಗಾರಪ್ಪ**

**೩. ಲೋಕೋಪಯೋಗಿ ಇಲಾಖೆಯಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ ; ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟನೆ**

**೪. ರಾಜ್ಯದಲ್ಲಿ ಇದೇ ೧೭ ರಿಂದ ಒಂದು ತಿಂಗಳು ಸೇವಾಸಂಕಲ್ಪ ಅಭಿಯಾನಕ್ಕೆ ಬಿಜೆಪಿ ನಿರ್ಧಾರ**

<><*<>*<>*><>

ಸರ್ಕಾರಿ ಆಸ್ಪತ್ರೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವುದು ವೈದ್ಯರು ಮತ್ತು ಸಿಬ್ಬಂದಿಯ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ. ಧಾರವಾಡದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ನಕಲಿ ವೈದ್ಯರು ಪತ್ತೆಯಾದರೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ನಕಲಿ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಸಂಬಂಧಪಟ್ಟ ಅಧಿಕಾರಿಗಳ ನಿರ್ಲಕ್ಷ್ಯ ಕಂಡುಬಂದರೆ ಅವರ ವಿರುದ್ಧವೂ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಗುತ್ತಿಗೆ ಆಧಾರದ ಮೇಲೆ ಮೂರರಿಂದ ಐದು ವರ್ಷ ಸೇವೆ ಸಲ್ಲಿಸಿರುವ ವೈದ್ಯರನ್ನು ಖಾಯಂಗೊಳಿಸುವ ಬಗ್ಗೆಯೂ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಹಾರದ ಗುಣಮಟ್ಟ ನೋಡಿ ಸೇವಿಸಿ ಎಂದು ಸಾರ್ವಜನಿಕರಿಗೆ ಸಂದೇಶ ರವಾನಿಸಿದ್ದಾರೆ. ಈಗಾಗಲೇ ಕಲಬೆರಕೆ ಆಹಾರಕ್ಕೆ ಸಂಬಂಧಿಸಿದಂತೆ ಹಲವು ಹಂತಗಳಲ್ಲಿ ತಪಾಸಣೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

<><*<>*<>*><>

ಖಾಸಗಿ ಶಾಲೆಗಳಲ್ಲಿ ಉತ್ತಮವಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರನ್ನೂ ರಾಜ್ಯ ಮಟ್ಟದ ಶಿಕ್ಷಕ ಪ್ರಶಸ್ತಿಗೆ ಪರಿಗಣಿಸುವಂತೆ ಬೇಡಿಕೆ ಇದ್ದು, ಈ ಬಗ್ಗೆ ಚಿಂತನೆ ನಡೆಸಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಆನೇಕಲ್ ತಾಲ್ಲೂಕಿನ ಖಾಸಗಿ ಶಾಲೆಗಳ ಒಕ್ಕೂಟದ ವತಿಯಿಂದ ಆಯೋಜಿಸಲಾಗಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಖಾಸಗಿ ಶಾಲೆಗಳ ಒಕ್ಕೂಟ ಸಲ್ಲಿಸಿರುವ ವಿವಿಧ ಬೇಡಿಕೆಗಳು ಸರ್ಕಾರದ ಗಮನದಲ್ಲಿವೆ. ಬೆಂಗಳೂರಿನ ಸಂಚಾರ ದಟ್ಟಣೆ ಹಿನ್ನೆಲೆಯಲ್ಲಿ ಶಾಲಾ ಸಮಯ ಬದಲಾವಣೆ ಮಾಡುವಂತೆ ಮನವಿ ಮಾಡಲಾಗಿದೆ. ಈ ಕುರಿತು ವಿವಿಧ ಇಲಾಖೆಗಳೊಂದಿಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ. ಖಾಸಗಿ ಶಾಲೆಗಳ ಆರ್ಆರ್ ನವೀಕರಣ ಹಾಗೂ ಬೆಂಗಳೂರು ನಗರದಲ್ಲಿ ಸರ್ಕಾರಿ ನೌಕರರಿಗೆ ನೀಡಲಾಗುತ್ತಿರುವ ಮನೆ ಬಾಡಿಗೆ ಭತ್ಯೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಶಿಕ್ಷಕರಿಗೂ ನೀಡುವಂತೆ ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ನೇತೃತ್ವದ ಸಮಿತಿ ಶಿಫಾರಸು ಮಾಡಿದೆ. ಈ ಕುರಿತು ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮಾತನಾಡಿ, ಮಧು ಬಂಗಾರಪ್ಪ ಅವರು ಶಿಕ್ಷಣ ಸಚಿವರಾಗಿ ಹಲವು ಮಹತ್ವದ ಬದಲಾವಣೆಗಳನ್ನು ಜಾರಿಗೆ ತಂದಿದ್ದು, ರಾಜ್ಯದ ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಗಣನೀಯ ಸುಧಾರಣೆ ಕಂಡುಬಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

<><*<>*<>*><>

ಜಾರಿ ನಿರ್ದೇಶನಾಲಯಕ್ಕೆ ತಮ್ಮ ವಿರುದ್ಧ ದೂರು ನೀಡಿದ ವ್ಯಕ್ತಿಯ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮಾಹಿತಿ ನೀಡಲಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಹಾಗೂ ತಮ್ಮ ಬೆಂಬಲಿಗರ ನಿವಾಸದಲ್ಲಿ

ನಡೆಸಿದ ಇಡಿ ಶೋಧ ಕಾರ್ಯಾಚರಣೆಗಳು ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಹೇಳಿದ್ದಾರೆ. ಇಡಿ ಆರೋಪಗಳು ಕೇವಲ ಶಂಕಿತ ಮತ್ತು ಆರೋಪಿತ ಅಂಶಗಳಷ್ಟೆ ಎಂದು ಸ್ಪಷ್ಟಪಡಿಸಿದ್ದಾರೆ. ಅಧಿಕಾರಿಗಳು ನೋಟಿಸ್ ನೀಡಿದರೆ ಉತ್ತರಿಸಲಾಗುವುದು ಎಂದು ತಿಳಿಸಿದ್ದಾರೆ. ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಲೋಕೋಪಯೋಗಿ ಇಲಾಖೆಯಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ ಎಂದು ಹೇಳಿದ್ದಾರೆ.

<><*<>*<>*><>

ವಿದೇಶದಲ್ಲಿ ಹೂಡಿಕೆ ಮಾಡುವುದು ಕಾನೂನು ಬಾಹಿರವೇ ಎಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳನ್ನು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸತೀಶ್ ಜಾರಕಿಹೊಳಿ ವಿರುದ್ಧ ಇಡಿ ಅಧಿಕಾರಿಗಳು ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಇಡಿ ಅಧಿಕಾರಿಗಳು ಜಾರಕಿಹೊಳಿ ಅವರ ಹಣದ ಜಾಡು ಸಾಬೀತುಪಡಿಸಲಿ ಎಂದು ಸವಾಲು ಹಾಕಿದ್ದಾರೆ.ತನಿಖಾ ಸಂಸ್ಥೆಯೊಂದು ಪತ್ರಿಕಾ ಹೇಳಿಕೆಯನ್ನು ಬಿಡುಗಡೆ ಮಾಡುವುದರಿಂದ ತಪ್ಪಿತಸ್ಥರೆಂದು ಸಾಬೀತುಪಡಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಈ ದಾಳಿ ರಾಜಕೀಯ ಪ್ರೇರಿತವಾಗಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<>*<>*><>

ಪ್ರಧಾನಿ ನರೇಂದ್ರ ಮೋದಿ ಅವರ ೨೫ ವರ್ಷಗಳ ಸಾರ್ವಜನಿಕ ಸೇವೆಯನ್ನು ಗುರುತಿಸುವ ನಿಟ್ಟಿನಲ್ಲಿ ರಾಜ್ಯ ಬಿಜೆಪಿ ಇದೇ ೧೭ರಿಂದ ಅಕ್ಟೋಬರ್ ೧೭ರವರೆಗೆ ರಾಜ್ಯಾದ್ಯಂತ ಒಂದು ತಿಂಗಳ ಕಾಲ 'ಸೇವಾ ಸಂಕಲ್ಪ ಅಭಿಯಾನ' ಹಮ್ಮಿಕೊಂಡಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಭಿಯಾನದ ಭಾಗವಾಗಿ ೧೨ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. 'ಆಶೀರ್ವಾದ ದೀಪ ಎಂಬ' ಕಾರ್ಯಕ್ರಮ ಹಾಗೂ ಭಾರತದ ಕನಸು ಕಾರ್ಯಕ್ರಮದಡಿಯಲ್ಲಿ ವಿದ್ಯಾರ್ಥಿಗಳಿಗೆ ಚಿತ್ರಕಲೆ ಮತ್ತು ಭಾಷಣ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದೆ. ದೇಶದಲ್ಲಿ ಆಗಿರುವ ಪರಿವರ್ತನೆಯನ್ನು ತೋರಿಸಲು 'ನಮೋ ಸೇವಾ, ಬೀದಿನಾಟಕ' ಕಾರ್ಯಕ್ರಮ ನಡೆಸಲಾಗುವುದು ಎಂದು ಹೇಳಿದ್ದಾರೆ.

<><*<>*<>*><>

ಭದ್ರಾ ಮೇಲ್ದಂಡೆ ಯೋಜನೆ ನೀರು, ಪ್ರಾಯೋಗಿಕವಾಗಿ ಚಿತ್ರದುರ್ಗದ ಗೋನೂರು ಕೆರೆ ತಲುಪಿದೆ. ಇದೇ ೨೪ರಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗೋನೂರು ಕೆರೆಯಲ್ಲಿ ಗಂಗಾ ಪೂಜೆ ನೆರವೇರಿಸಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಟಿ.ರಘುಮೂರ್ತಿ ತಿಳಿಸಿದ್ದಾರೆ. ಹಿರಿಯೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುಮಾರು ೮೦ ಕೆರೆಗಳನ್ನು ತುಂಬಿಸುವ ಕಾರ್ಯ ನಡೆಯುತ್ತಿದೆ ಎಂದು ಹೇಳಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಯನ್ನು ೨೦೨೮ರ ವೇಳೆಗೆ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ. ಯೋಜನೆಯಡಿ ಚಿತ್ರದುರ್ಗ, ಚಿಕ್ಕಮಗಳೂರು, ತುಮಕೂರು ಹಾಗೂ ದಾವಣಗೆರೆ ಜಿಲ್ಲೆಗಳ ವ್ಯಾಪ್ತಿಯ ೩೬೭ ಕೆರೆಗಳಿಗೆ ನೀರು ಒದಗಿಸುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<>*<>*><>

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿನ ವಿವಿಧ ಸಮುದಾಯಗಳ ಭವನ ನಿರ್ಮಾಣ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ಅಗತ್ಯವಿರುವ ಅನುದಾನ ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಹಿರಿಯೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಳೆಯ ವಸತಿ ಶಾಲೆಗಳ ಸುಧಾರಣೆ ಹಾಗೂ ಹೊಸ ವಸತಿ ಶಾಲೆಗಳನ್ನು ಮಂಜೂರು ಮಾಡುವ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ.

<><*<>*<>*><>

ಮಂಡ್ಯ ತಾಲ್ಲೂಕಿನ ಕೊತ್ತತ್ತಿ ಹೋಬಳಿಯಲ್ಲಿ ಹಲವು ವರ್ಷಗಳಿಂದ ಕೃಷಿ ಮಾಡಿಕೊಂಡು ಜೀವನ ನಡೆಸುತ್ತಿರುವ ರೈತ ಕುಟುಂಬಗಳ ಜಮೀನು ವ್ಯಾಜ್ಯಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು ಎಂದು ಶಾಸಕ ರಮೇಶ್ ಬಂಡಿಸಿದ್ದೇಗೌಡ ಸೂಚಿಸಿದ್ದಾರೆ. ಮಂಡ್ಯ ತಾಲ್ಲೂಕಿನ ಕೊತ್ತತ್ತಿ ಗ್ರಾಮದಲ್ಲಿ ನಡೆದ ಪ್ರಜಾ ಸೇವೆ ಆಂದೋಲನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೊತ್ತತ್ತಿ

ಹೋಬಳಿಯಲ್ಲಿ ೧೯೬೦ಕ್ಕೂ ಹಿಂದಿನಿಂದಲೂ ಕೆಲವು ಕುಟುಂಬಗಳು ಜಮೀನಿನಲ್ಲಿ ವ್ಯವಸಾಯ ಮಾಡಿಕೊಂಡು ಬರುತ್ತಿದ್ದು, ಕೆಲವರ ಬಳಿ ಅಗತ್ಯ ದಾಖಲೆಗಳಿವೆ. ಇನ್ನು ಕೆಲವು ಕುಟುಂಬಗಳ ಬಳಿ ದಾಖಲೆಗಳ ಕೊರತೆಯಿರುವುದರಿಂದ ಜಮೀನು ಸಂಬಂಧಿತ ವ್ಯಾಜ್ಯಗಳು ಉಂಟಾಗಿವೆ ಎಂದು ತಿಳಿಸಿದ್ದಾರೆ.

**<><*<>*<>*><>**

ರಾಯಚೂರು ಜಿಲ್ಲೆಯ ರಸ್ತೆ ಮೂಲಸೌಕರ್ಯ ಅಭಿವೃದ್ಧಿಯ ನಿಟ್ಟಿನಲ್ಲಿ ಜಿಲ್ಲೆಯ ಎನ್‌ಹೆಚ್-೭೪೮ಎ ಹೆದ್ದಾರಿಯ ೨೭೩.೪ ಕಿಲೋಮೀಟರ್‌ನಿಂದ ೩೩೧.೩೩ ಕಿಲೋಮೀಟರ್‌ರವರೆಗೆ ರಸ್ತೆ ಅಭಿವೃದ್ಧಿ, ವಿಸ್ತರಣೆ ಹಾಗೂ ಸುಧಾರಣೆ ಕಾಮಗಾರಿಗೆ ಸಂಬಂಧಿಸಿದಂತೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಭೂಸ್ವಾಧೀನ ಅಧಿಸೂಚನೆ ಹೊರಡಿಸಿದೆ. ಬೆಳಗಾವಿ-ರಾಯಚೂರು ಹೆದ್ದಾರಿ ಕಾಮಗಾರಿ ವಿಳಂಬವಾಗಿದ್ದ ಹಿನ್ನೆಲೆಯಲ್ಲಿ, ರಾಯಚೂರು-ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ.ಕುಮಾರ, ನಾಯಕ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದರು. ಸಂಸದರ ನಿರಂತರ ಪ್ರಯತ್ನದ ಫಲವಾಗಿ ಇದೀಗ ಭೂಸ್ವಾಧೀನ ಅಧಿಸೂಚನೆ ಪ್ರಕಟವಾಗಿದ್ದು, ಹೆದ್ದಾರಿ ಅಭಿವೃದ್ಧಿ ಕಾಮಗಾರಿಯ ಮುಂದಿನ ಹಂತಗಳಿಗೆ ವೇಗ ದೊರೆತಿದೆ.

**<><*<>*<>*><>**

ಅಬಕಾರಿ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ನಗರದಲ್ಲಿ ನಡೆಯುತ್ತಿರುವ ವಿವಿಧ ಸರ್ಕಾರಿ ಕಟ್ಟಡಗಳ ಕಾಮಗಾರಿಗಳನ್ನು ಇಂದು ವೀಕ್ಷಿಸಿದರು. ಹಾಸನ ಜಿಲ್ಲಾಧಿಕಾರಿ ಕಚೇರಿ ಕಟ್ಟಡ ಕಾಮಗಾರಿ ವೀಕ್ಷಿಸಿದ ಸಚಿವರು, ಆದಷ್ಟು ಬೇಗ ಕಾಮಗಾರಿ ಮುಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಬಳಿಕ ಹಾಸನದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ಕಾಮಗಾರಿ ವೀಕ್ಷಿಸಿ ಅಗತ್ಯ ಅನುದಾನ, ಸಿಬ್ಬಂದಿ ಮತ್ತು ಮೂಲಭೂತ ಸೌಕರ್ಯಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

**<><*<>*<>*><>**

೧. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಸ್ತುತ ೪೪ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಖಾಸಗಿ ಕೊಳವೆ ಬಾವಿಗಳಿಂದ ಕುಡಿಯುವ ನೀರನ್ನು ಪೂರೈಸುವ ಮೂಲಕ ಜನ ಜಾನುವಾರುಗಳಿಗೆ ತೊಂದರೆಯಾಗದಂತೆ ಎಚ್ಚರವಹಿಸಿ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ.ನವೀನ್ ಭಟ್ ತಿಳಿಸಿದ್ದಾರೆ.

೨. ಗಣೇಶ ಚತುರ್ಥಿ ಹಬ್ಬದ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಇದೇ ೧೪ರಂದು ಪ್ರಾಣಿವಧೆ ಹಾಗೂ ಮಾಂಸ ಮಾರಾಟ ಸಂಪೂರ್ಣವಾಗಿ ನಿಷೇಧಿಸಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೫ ಕ್ಕೆ<>*><>**